ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 170 ಸ್ಸೇಮರ 2018(ಭಾ-5)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:05.03.2020.

## ಸುತ್ತೋಲೆ

ವಿಷಯ:- ಕರೋನಾ ವೈರಸ್ ಬಾಧಿತ ಕಾರ್ಮಿಕರಿಗೆ 28 ದಿನಗಳ ವೇತನಸಹಿತ ರಜೆಯನ್ನು ನೀಡುವ ಕುರಿತು.

*****

ಕರ್ನಾಟಕ ರಾಜ್ಯದಲ್ಲಿ ಕರೋನಾ ವೈರಸ್ ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆಯು ಸೂಕ್ತ ಕ್ರಮವಹಿಸುವ ತುರ್ತು ಅಗತ್ಯತೆ ಇದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈ ಕೆಳಕಂಡಂತೆ ಕ್ರಮವಹಿಸುವುದು.

1. ಕರೋನಾ ವೈರಸ್ ಬಾಧಿತ ಕಾರ್ಮಿಕರಿಗೆ 28 ದಿನಗಳ ರಜೆಯ ಅಗತ್ಯವಿರುವುದರಿಂದ ಇ.ಎಸ್.ಐ ಕಾಯ್ದೆ ಅನ್ವಯವಾಗುವ ಸಂಸ್ಥೆಗಳ ಕಾರ್ಮಿಕರು ತಮ್ಮ ಹತ್ತಿರದ ಇ.ಎಸ್.ಐ. ಔಷಧಾಲಯ / ಆಸ್ಪತ್ರೆಗಳಿಗೆ ತೆರಳಿ ಸದರಿ ಆಸ್ಪತ್ರೆಗಳಲ್ಲಿನ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
2. ಈ ರೀತಿ ಪ್ರಮಾಣ ಪತ್ರ ಪಡೆಯಲು ಬರುವ ಕಾರ್ಮಿಕರಿಗೆ ಎಲ್ಲಾ ಇ.ಎಸ್.ಐ ವೈದ್ಯಾಧಿಕಾರಿಗಳು ತುರ್ತಾಗಿ ಪರಿಶೀಲನೆ ನಡೆಸಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ನೀಡತಕ್ಕದ್ದು.
3. ಅಂತಹ ಕಾರ್ಮಿಕರು ಇ.ಎಸ್.ಐ ನಿಂದ ನೀಡಲ್ಪಟ್ಟ ಪ್ರಮಾಣ ಪತ್ರವನ್ನು ತಮ್ಮ ಸಂಸ್ಥೆಯ ಆಡಳಿತವರ್ಗಕ್ಕೆ ಸಲ್ಲಿಸಿದ ತಕ್ಷಣ 28 ದಿನಗಳ ರಜೆಯನ್ನು ಕಡ್ಡಾಯವಾಗಿ ಮಂಜೂರು ಮಾಡತಕ್ಕದ್ದು.
4. ಇ.ಎಸ್.ಐ. ಕಾಯ್ದೆ ಅನ್ವಯವಾಗದಿರುವ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ನೌಕರರು ಕರೋನಾ ವೈರಸ್ ಬಾಧಿತರಾದಲ್ಲಿ ಅವರಿಗೆ ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಲಂ 15(3) ಅನ್ವಯ 28 ದಿನಗಳ ವೇತನಸಹಿತ ಅನಾರೋಗ್ಯದ ರಜೆ ಮತ್ತು ಇತರೆ ರಜೆಯನ್ನು ಕಡ್ಡಾಯವಾಗಿ ಮಂಜೂರು ಮಾಡತಕ್ಕದ್ದು.

ಸಿ.ಆರ್.ಪಿ.ಸಿ ಕಾಯ್ದೆಯ ಕಲಂ 144ರನ್ವಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ತುರ್ತು ಸಂದರ್ಭದಲ್ಲಿ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲು ಅಧಿಕಾರವಿದ್ದು, ಅದರಂತೆ ಕರೋನಾ ವೈರಸ್ ಬಾಧಿತ ವ್ಯಕ್ತಿಗಳು ಇತರೆ ಜನರ ಸಂಪರ್ಕಕ್ಕೆ ಬಾರದಂತೆ ಪ್ರತ್ಯೇಕವಾಗಿರಿಸಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.

(ಸಂಧ್ಯಾ ಎಲ್. ನಾಯಕ್)
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ

ಇವರಿಗೆ:
ನಿರ್ದೇಶಕರು, ಕರ್ನಾಟಕ ರಾಜ್ಯ ವಿಮಾ ವೈದ್ಯಕೀಯ ಸೇವೆಗಳು, ರಾಜಾಜಿನಗರ, ಬೆಂಗಳೂರು. (ಈ ಸುತ್ತೋಲೆಯನ್ನು ತಮ್ಮ ಅಧೀನದಲ್ಲಿ ಬರುವ ಎಲ್ಲಾ ವೈದ್ಯಾಧಿಕಾರಿಗಳ ಗಮನಕ್ಕೆ ತರುವುದು.)

ಪ್ರತಿಯನ್ನು ಮಾಹಿತಿಗಾಗಿ:
1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಮಾನ್ಯ ಸಚಿವರ ಅವಗಾಹನೆಗಾಗಿ ತರುವುದಕ್ಕಾಗಿ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ವಿಕಾಸ ಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.